ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2474
ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 23-03-2022
ಉತ್ತರಿಸುವ ಸಚಿವರು : ಕಂದಾಯ ಸಚಿವರು

ಪ್ರಶ್ನೆ	ಉತ್ತರ
(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ 2019 ರಿಂದ ಇಲ್ಲಿಯವರೆಗೂ ಬರ ಪರಿಹಾರ ಯೋಜನೆಯಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು; ಅದರಲ್ಲಿ ರಾಜ್ಯದ ಹಾಗೂ ಕೇಂದ್ರ ಸರ್ಕಾರದ ಪಾಲೇಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)	ಕೋಲಾರ ಜಿಲ್ಲೆಗೆ ಸಂಬಂಧಿಸಿದಂತೆ • 2019-20ನೇ ಸಾಲಿನಲ್ಲಿ ಸರ್ಕಾರವು ಕೋಲಾರ ಜಿಲ್ಲೆಯನ್ನು ಬರ ಪೀಡಿತ ಜಿಲ್ಲೆಯೆಂದು ಘೋಷಿಸಿದ್ದು, ರೂ.10.00ಕೋಟಿ ಅನುದಾನವನ್ನು ಬರ ಪರಿಹಾರ ಕಾರ್ಯಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. • 2020-21 ಮತ್ತು 2021-22ನೇ ಸಾಲಿನಲ್ಲಿ ಕೋಲಾರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಘೋಷಿಸಿರುವುದಿಲ್ಲವಾದ್ದರಿಂದ ಯಾವುದೇ ಅನುದಾನವು ಬಿಡುಗಡೆ ಮಾಡಿರುವುದಿಲ್ಲ. ಚಿಕ್ಕಬಳ್ಳಾಪುರ ಜಿಲ್ಲೆಗೆ ಸಂಬಂಧಿಸಿದಂತೆ • 2019-20ನೇ ಸಾಲಿನಲ್ಲಿ 3 ತಾಲ್ಲೂಕು (ಚಿಂತಾಮಣಿ, ಗುಡಿಬಂಡೆ, ಬಾಗೇಪಲ್ಲಿ) ಬರ ಪೀಡಿತ ಪ್ರದೇಶವೆಂದು ಘೋಷಣೆಯಾಗಿರುತ್ತದೆ. • 2020-21 ಮತ್ತು 2021-22ನೇ ಸಾಲಿನಲ್ಲಿ ಯಾವುದೇ ತಾಲ್ಲೂಕು ಬರ ಪೀಡಿತ ಪ್ರದೇಶವೆಂದು ಘೋಷಣೆಯಾಗಿರುವುದಿಲ್ಲ. ಬರ ನಿರ್ವಹಣೆಗೆ ಪ್ರತ್ಯೇಕವಾಗಿ ಅನುದಾನ ಬಿಡುಗಡೆಯಾಗಿರುವುದಿಲ್ಲ. ಬರ ಘೋಷಣೆಯಾದ ತಾಲ್ಲೂಕುಗಳ ನಿರ್ವಹಣೆಗಾಗಿ ಜಿಲ್ಲೆಯ ಪ್ರಕೃತಿ ವಿಕೋಪ ಶಾಖೆಯ ಪಿ.ಡಿ. ಖಾತೆಯಲ್ಲಿ ಲಭ್ಯವಿರುವ ಅನುದಾನದಡಿಯಲ್ಲಿ ಬಳಸಿಕೊಂಡು ಬರ ನಿರ್ವಹಣೆ ಮಾಡಲಾಗಿರುತ್ತದೆ.
(ಆ) ಈ ಅನುದಾನದಲ್ಲಿ ಕೈಗೊಂಡ ಕಾರ್ಯಕ್ರಮಗಳೇನು; (ವಿವರ ನೀಡುವುದು)	2019-20ನೇ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನದಲ್ಲಿ ಕುಡಿಯುವ ನೀರಿನ ತುರ್ತು ಕಾಮಗಾರಿಗಳಾದ ಕೊಳವೆ ಬಾವಿ, ಮರು ಆಳಗೊಳಿಸುವುದು, ಪೈಪ್‌ಲೈನ್ ಅಳವಡಿಕೆ, ಕೊರೆಯಲಾಗಿರುವ ಕೊಳವೆ ಬಾವಿಗಳಿಗೆ ಮೋಟಾರು ಅಳವಡಿಸುವುದು ಸಮಸ್ಯಾತ್ಮಕ ಗ್ರಾಮಗಳು/ ನಗರ/ ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರನ್ನು ಖಾಸಗಿ ಟ್ಯಾಂಕರ್ ಮತ್ತು ಪೈಪ್‌ಲೈನ್ ಮೂಲಕ ಸರಬರಾಜು ಮಾಡಲು ಮತ್ತು ಜಾನುವಾರು ಮೇವು ಬೆಳೆಯಲು ಮಿನಿಕಿಟ್, ಗೋಶಾಲೆ ನಿರ್ವಹಣೆ ಹಾಗೂ ಜಾನುವಾರು ಮೆಡಿಕಲ್ ಕ್ಯಾಂಪ್ ನಿರ್ವಹಣೆಯಂತಹ ಪರಿಹಾರ ಕಾರ್ಯಗಳನ್ನು ಕೈಗೊಳ್ಳಲಾಗಿರುತ್ತದೆ.

(ಇ) ಸದರಿ ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಸಲಾಗಿದೆ; (ಖರ್ಚಾಗಿರುವ ಅನುದಾದ ವಿವರ ನೀಡುವುದು)	ಕೋಲಾರ ಜಿಲ್ಲೆಯಲ್ಲಿ, ಬಳಕೆಯಾದ ಅನುದಾನದ ವಿವರ: 1) ಕುಡಿಯುವ ನೀರಿನ ದುರಸ್ಥಿ ಕಾಮಗಾರಿಗೆ ರೂ.166.00ಲಕ್ಷ 2) ಸಮಸ್ಯಾತ್ಮಕ ಗ್ರಾಮಗಳು/ನಗರ/ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರನ್ನು ಖಾಸಗಿ ಟ್ಯಾಂಕರ್ ಮತ್ತು ಪೈಪ್‌ಲೈನ್ ಮೂಲಕ ನೀರು ಸರಬರಾಜು ಮಾಡಲು ರೂ.436.00ಲಕ್ಷ 3) ಜಾನುವಾರು ಮೇವು ಬೆಳೆಯಲು ಮಿನಿಕಿಟ್ ಹಾಗೂ ಜಾನುವಾರು ಮೆಡಿಕಲ್ ಕ್ಯಾಂಪ್ ನಿರ್ವಹಣೆಗೆ ರೂ.56.00ಲಕ್ಷ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬಳಕೆಯಾದ ಅನುದಾನದ ವಿವರ: 1) ಕುಡಿಯುವ ನೀರಿನ ದುರಸ್ಥಿ ಕಾಮಗಾರಿಗೆ ರೂ.1067.00ಲಕ್ಷ 2) ಸಮಸ್ಯಾತ್ಮಕ ನಗರ/ ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆಗೆ ರೂ.1096.00ಲಕ್ಷ 3) ಮೇವು ಬ್ಯಾಂಕ್ ನಿರ್ವಹಣೆಗೆ ರೂ.28.00ಲಕ್ಷ 4) ಗೋಶಾಲೆ ನಿರ್ವಹಣೆಗೆ ರೂ.39.00ಲಕ್ಷ
(ಈ) ಜಿಲ್ಲೆಗಳಲ್ಲಿ ಅನುದಾನ ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೋಲಾರ ಜಿಲ್ಲೆಗೆ ಬಿಡುಗಡೆ ಮಾಡಲಾದ ಅನುದಾನದ ಪೈಕಿ ಉಳಿಕೆಯಾದ ರೂ.295.00ಲಕ್ಷಗಳನ್ನು ಸರ್ಕಾರದ ಆದೇಶದಂತೆ ಕೋವಿಡ್-19 ನಿಯಂತ್ರಣಕ್ಕಾಗಿ ಬಳಕೆ ಮಾಡಲಾಗಿರುತ್ತದೆ.
(ಉ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?	ಚಿಕ್ಕಬಳ್ಳಾಪುರ ಜಿಲ್ಲೆಗೆ ಸರ್ಕಾರದಿಂದ ಬರ ಪರಿಹಾರಕ್ಕಾಗಿ SDRFರಡಿ ಬಿಡುಗಡೆಯಾದ ಅನುದಾನ ಸಂಪೂರ್ಣವಾಗಿ ವೆಚ್ಚವಾಗಿದೆ.

ಕಂಇ 131 ಟಿಎನ್‌ಆರ್ 2022

(ಆರ್. ಅಶೋಕ)
ಕಂದಾಯ ಸಚಿವರು